ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 31/1/2020

# ಶಾಸಕರ ಹಕ್ಕು ಮೊಟಕು ಸಲ್ಲ: ಸಿದ್ದರಾಮಯ್ಯ

ಬೆಂಗಳೂರು: ವಿಧಾನಮಂಡಲದ ಜಂಟಿ ಅಧಿವೇಶನದಲ್ಲಿ ರಾಜ್ಯಪಾಲರ ಭಾಷಣದ ವೇಳೆ ಶಾಸಕರು ಮಾತನಾಡಿದರೆ ಅಮಾನತುಗೊಳಿಸಲಾಗುವುದು ಎಂದು ಹೇಳಿದರೆ, ಅದು ಶಾಸಕರ 'ಅಭಿವ್ಯಕ್ತಿ ಸ್ವಾತಂತ್ರ್ಯ ಹತ್ತಿಕ್ಕಿದಂತೆ' ಎಂದು ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಹೇಳಿದರು. ಕಾಂಗ್ರೆಸ್ ಭವನದಲ್ಲಿ ಸುದ್ದಿಗಾರರು ಕೇಳಿದ ಪ್ರಶ್ನೆಗೆ ಉತ್ತರಿಸಿ, ಸದನದಲ್ಲಿ ಮಾತನಾಡುವುದು ಶಾಸಕರ ಹಕ್ಕು, ಅದರಿಂದ ತಡೆಯಲು ಯಾರಿಗೂ ಅಧಿಕಾರವಿಲ್ಲ, ಕಾಂಗ್ರೆಸ್ ಇದನ್ನು ಒಪ್ಪುವುದಿಲ್ಲ, ಶಾಸಕರ ಹಕ್ಕು ಮೊಟಕುಗೊಳಿಸಲು ಬಿಡಲ್ಲ ಎಂದರು. ವಿಧಾನಸಭೆ, ವಿಧಾನಪರಿಷತ್ ನಿಯಮಾವಳಿಗಳ ಪ್ರಕಾರ ನಡೆಯುತ್ತದೆ. ಸಭಾಪತಿ ಹಾಗೂ ಸ್ಪೀಕರ್ ಸಂವಿಧಾನಿಕ ಚೌಕಟ್ಟಿನಲ್ಲಿ ನಡೆದುಕೊಳ್ಳಬೇಕಾಗುತ್ತದೆ. ಎಂದರು.